**All India Radio: Bangalore**
**Regional Bulletin In Kannada**
**12.04.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**12.04.2025 / 2.30 p.m.**
**<><><><>**

ಮುಖ್ಯಾಂಶಗಳು

- ಹುಬ್ಬಳ್ಳಿ-ಧಾರವಾಡ ನಡುವೆ ಪ್ರಾಯೋಗಿಕವಾಗಿ ವಿದ್ಯುತ್ ಚಾಲಿತ ಕ್ಷಿಪ್ರ ಸಾರಿಗೆ ಯೋಜನೆ - ವಿವಿಧ ಸಂಸ್ಥೆಗಳೊಂದಿಗೆ ಇಂದು ಸರ್ಕಾರ ಒಪ್ಪಂದ
- ತಾಂತ್ರಿಕ ಸಮಸ್ಯೆ ಹಿನ್ನೆಲೆ ; ದೇಶಾದ್ಯಂತ ಯುಪಿಐ, ಬ್ಯಾಂಕಿಂಗ್ ಸೇವೆಗಳಲ್ಲಿ ವ್ಯತ್ಯಯ
- ಬೆಂಗಳೂರಿನಲ್ಲಿ ಇಂದು ಐತಿಹಾಸಿಕ ಕರಗ ಶಕ್ತ್ಯೋತ್ಸವ ; ಬಿಗಿ ಭದ್ರತೆ
- ರಾಜ್ಯದ ವಿವಿಧೆಡೆ ಮುಂದಿನ ೫ ದಿನ ಗುಡುಗು ಸಹಿತ ಮಳೆ ; ಹವಾಮಾನ ಇಲಾಖೆ ಮುನ್ಸೂಚನೆ

<><><><>

ಹುಬ್ಬಳ್ಳಿ-ಧಾರವಾಡ ನಡುವೆ ವಿದ್ಯುತ್ ಚಾಲಿತ ಕ್ಷಿಪ್ರ ಸಾರಿಗೆ ಯೋಜನೆ ಆರಂಭಿಸುವ ಕುರಿತು ವಿವಿಧ ಸಂಸ್ಥೆಗಳೊಂದಿಗೆ ಪರಸ್ಪರ ಒಡಂಬಡಿಕೆಗೆ ಇಂದು ಸರ್ಕಾರ ಸಹಿ ಹಾಕಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನಿವಾಸ ಕಾವೇರಿಯಲ್ಲಿ ನಡೆದ ಸಭೆಯಲ್ಲಿ ಯೋಜನೆ ಅನುಷ್ಠಾನ ಕುರಿತು ಮೂರು ತಿಂಗಳ ಒಳಗಾಗಿ ವಿವರವಾದ ಯೋಜನಾ ವರದಿ ಸಿದ್ಧಪಡಿಸಲು ಮುಖ್ಯಮಂತ್ರಿ ಸೂಚನೆ ನೀಡಿದ್ದಾರೆ. ಹುಬ್ಬಳ್ಳಿ-ಧಾರವಾಡದಲ್ಲಿ ಈ ಯೋಜನೆ ಯಶಸ್ವಿಯಾದರೆ ರಾಜ್ಯದ ೨ನೇ ಹಂತದ ನಗರಗಳಿಗೂ ಇದನ್ನು ವಿಸ್ತರಿಸಬಹುದಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೆಟ್ರೋ ಮಾದರಿಯ ಈ ಸಂಚಾರಿ ವ್ಯವಸ್ಥೆ ಯುರೋಪ್‌ನ ಹಲವು ರಾಷ್ಟ್ರಗಳಲ್ಲಿ ಯಶಸ್ವಿಯಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಸಂಸ್ಥೆಯ ಪ್ರತಿನಿಧಿಗಳು ಮಾಹಿತಿ ನೀಡಿದ್ದಾರೆ. ಇದು ಸಂಪೂರ್ಣ ವಿದ್ಯುತ್ ಚಾಲಿತ ವ್ಯವಸ್ಥೆಯಾಗಿದ್ದು, ೨೫೦ ಮಂದಿ ಒಮ್ಮೆಗೆ ಪ್ರಯಾಣಿಸಬಹುದಾಗಿದೆ. ಕಳೆದ ಒಂದು ವರ್ಷದಿಂದ ಇದರ ಬಗ್ಗೆ ಅಧ್ಯಯನ ನಡೆಸಲಾಗಿದ್ದು, ಸಚಿವ ಸಂತೋಷ್ ಲಾಡ್ ಸ್ವಿಡ್ಜರ್‌ಲ್ಯಾಂಡ್‌ಗೆ ತೆರಳಿ ಯೋಜನೆಯ ಪ್ರಾಯೋಗಿಕ ಯಶಸ್ಸನ್ನು ಅಧ್ಯಯನ ನಡೆಸಿದ್ದರು.

<><><><>

ತಾಂತ್ರಿಕ ಸಮಸ್ಯೆ ಹಿನ್ನೆಲೆಯಲ್ಲಿ ಏಕೀಕೃತ ಪಾವತಿ ಇಂಟರ್ ಫೇಸ್ - ಯುಪಿಐ ಸೇವೆಯ ಮೂಲಕ ನಡೆಯುತ್ತಿರುವ ಡಿಜಿಟಲ್ ಪಾವತಿಗಳು ದೇಶಾದ್ಯಂತ ಇಂದು ಸ್ಥಗಿತಗೊಂಡಿದೆ. ಇದು ಗೂಗಲ್ ಪೇ, ಫೋನ್ ಪೇ, ಪೆಟಿಎಂ, ಸೇರಿದಂತೆ ಯುಪಿಐ ವಹಿವಾಟು ನಡೆಸುತ್ತಿದ್ದ ಕೋಟ್ಯಾಂತರ ಬಳಕೆದಾರರ ಮೇಲೆ ಪರಿಣಾಮ ಬೀರಿದೆ.

ಜೊತೆಗೆ ಎಸ್‌ಬಿಐ, ಐಸಿಸಿಐ ಸೇರಿದಂತೆ ಪ್ರಮುಖ ಬ್ಯಾಂಕಿಂಗ್ ಅಪ್ಲಿಕೇಶನ್‌ಗಳ ಮೇಲೂ ಪರಿಣಾಮ ಬೀರಿದೆ. ಇದಕ್ಕೆ ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ನ್ಯಾಷನಲ್ ಪೇಮೆಂಟ್ ಕಾರ್ಪೋರೇಶನ್ ಆಫ್ ಇಂಡಿಯಾ ತಾಂತ್ರಿಕ ಸಮಸ್ಯೆಗಳಿಂದ ಯುಪಿಐ ವಹಿವಾಟಿನಲ್ಲಿ ಸಮಸ್ಯೆಯಾಗಿದೆ. ಸಮಸ್ಯೆ ಪರಿಹಾರಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಲಾಗುತ್ತಿದೆ ಎಂದು ಸ್ಪಷ್ಟನೆ ನೀಡಿದೆ.

<><><>

ರಾಯಚೂರು ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆ ವಿಚಾರದಲ್ಲಿ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಇಂದು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೀರಿಲ್ಲ ಎಂದು ಜನರು ಪ್ರತಿಭಟನೆಗೆ ಇಳಿಯುವ ಹಂತಕ್ಕೆ ಬರಬಾರದು ಎಂದು ಹೇಳಿದ್ದಾರೆ. ಗ್ರಾಮ ಪಂಚಾಯತ್ ಪಿಡಿಓಗಳು ಕರೆ ಸ್ವೀಕರಿಸುವ ಮೂಲಕ ಜನರಿಗೆ ಸ್ಪಂದಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರಗಳಿಗೆ ನಿಯಮಿತವಾಗಿ ಟ್ಯಾಂಕರ್ ನೀರು ಪೂರೈಕೆ ಮಾಡಬೇಕು. ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸಹಾಯವಾಣಿ ಆರಂಭಿಸಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಸಿಂಧನೂರ, ಮಸ್ಕಿ ಮತ್ತು ಮಾನ್ವಿ ತಾಲೂಕುಗಳ ವ್ಯಾಪ್ತಿಯಲ್ಲಿ ಸುರಿದ ಮಳೆ ಮತ್ತು ಬಿರುಗಾಳಿಯಿಂದಾಗಿ ಬೆಳೆ ಹಾನಿಗೀಡಾದ ಬಗ್ಗೆ ಕೂಡಲೇ ಸರ್ವೆ ನಡೆಸಿ ವರದಿ ನೀಡುವಂತೆ ಸಚಿವರು ತಿಳಿಸಿದ್ದಾರೆ.

<><><>

ಇ-ಖಾತಾ ಮಾಡುವುದರಿಂದ ಯಾರು ದಾಖಲೆಗಳನ್ನು ನಕಲು ಮಾಡಲು ಸಾಧ್ಯವಿಲ್ಲ. ಆದ್ದರಿಂದ ಎಲ್ಲರು ಇ-ಖಾತೆ ಮಾಡಿಸಿಕೊಳ್ಳಬೇಕು ಎಂದು ಶಾಸಕ ತನ್ವಿರ್ ಸೇಠ್ ತಿಳಿಸಿದ್ದಾರೆ. ಮೈಸೂರು ನಗರ ಪಾಲಿಕೆ ಸಭಾಂಗಣದಲ್ಲಿ ನಡೆದ ನರಸಿಂಹರಾಜ ಕ್ಷೇತ್ರದ ಇ-ಖಾತಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಶಾಸಕ ತನ್ವೀರ್ ಸೇಠ್, ಜನರಿಗೆ ಸಹಕಾರಿಯಾಗಲೆಂದು ಇ-

ಖಾತಾ ಮಾಡುವ ವ್ಯವಸ್ಥೆಯನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದೆ ಎಂದು ಹೇಳಿದ್ದಾರೆ. ಕಂದಾಯ ಅಧಿಕಾರಿಗಳು ಅಸ್ತಿ ತೆರಿಗೆ ಸಂಗ್ರಹಿಸುವಾಗ ಇ-ಖಾತೆ ಮಾಡಿಸಲಾಗಿದೆ ಎಂಬುದನ್ನು ಪರಿಶೀಲಿಸಬೇಕು, ಯಾರು ಇ-ಖಾತೆಗಳನ್ನು ಮಾಡಿಸಿಕೊಂಡಿಲ್ಲವೋ ಅಂತಹವರಿಗೆ ಇ-ಖಾತೆಯ ಬಗ್ಗೆ ಅರಿವು ಮೂಡಿಸಬೇಕಿದೆ ಎಂದು ತಿಳಿಸಿದ್ದಾರೆ.

<><><>

ಪಾರಂಪರಿಕ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡುವ ಸಂಬಂಧ ಮಡಿಕೇರಿಯಲ್ಲಿ ೧೨ ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗೆ ಶಾಸಕ ಡಾ.ಮಂತರ್ ಗೌಡ ಹಾಗೂ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಚಾಲನೆ ನೀಡಿದ್ದಾರೆ. ಈ ವೇಳೆ ಮಾತನಾಡಿದ ಯದುವೀರ್ ಒಡೆಯರ್, ಸ್ವಚ್ಚ ಭಾರತ್ ಅಭಿಯಾನ ಯೋಜನೆಯಡಿ ವೈಜ್ಞಾನಿಕವಾಗಿ ಘನತ್ಯಾಜ್ಯ ವಿಲೇವಾರಿಗೆ ಮುಂದಾಗಿದ್ದು, ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರದಿಂದ ಶೇಕಡ ೫೦ ರಷ್ಟು ಅನುದಾನ ಒದಗಿಸಲಾಗಿದೆ ಎಂದು ತಿಳಿಸಿದ್ದಾರೆ.

<><><>

ಬೆಂಗಳೂರಿನಲ್ಲಿ ಇಂದು ಐತಿಹಾಸಿಕ ಕರಗ ಶಕ್ತ್ಯೋತ್ಸವ ನಡೆಯಲಿದೆ. ಕರಗ ಉತ್ಸವಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವುದರಿಂದ ತಿಗಳರ ಪೇಟೆಯಲ್ಲಿರುವ ಧರ್ಮರಾಯಸ್ವಾಮಿ ದೇವಸ್ಥಾನದ ಸುತ್ತಮುತ್ತ ತಾತ್ಕಾಲಿಕವಾಗಿ ಸಂಚಾರ ನಿರ್ಬಂಧಿಸಲಾಗಿದೆ ಎಂದು ಬೆಂಗಳೂರು ಸಂಚಾರಿ ಪೊಲೀಸರು ತಿಳಿಸಿದ್ದಾರೆ. ನಾಳೆ ಮುಂಜಾನೆ ಬೆಂಗಳೂರಿನ ಕೆ.ಆರ್. ಮಾರುಕಟ್ಟೆ, ಚಾಮರಾಜಪೇಟೆ ಹಾಗೂ ಉಪ್ಪಾರಪೇಟೆ ಸಂಚಾರ ಪೊಲೀಸ್ ಠಾಣಾ ಸರಹದ್ದಿನ ಪ್ರಮುಖ ರಸ್ತೆಯಲ್ಲಿ ಕರಗ ಮೆರವಣಿಗೆ ಹಾದು ಹೋಗಲಿದೆ. ಧರ್ಮರಾಯ ಸ್ವಾಮಿ ದೇಗುಲದ ಸುತ್ತಮುತ್ತ ಬಿಗಿ ಭದ್ರತೆ ಏರ್ಪಡಿಸಲಾಗಿದೆ. ಚೈತ್ರ ಪೂರ್ಣಿಮೆಯ ಬೆಳದಿಂಗಳ ಬೆಳಕಲ್ಲಿ ಕರಗ ನಡೆಯುವುದು ವಿಶೇಷವಾಗಿದೆ.

<><><>

ಕೋಲಾರ ಜಿಲ್ಲೆಯಲ್ಲಿ ಮುಂಬರುವ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಗತ್ಯವಿರುವ ಎಲ್ಲ ಕ್ರಮ ಕೈಗೊಳ್ಳುಲು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಬೇಸಿಗೆ ಸಮಯದಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವಿನ ಸಮಸ್ಯೆಯಾಗದಂತೆ ಕ್ರಮಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ. ಕುಡಿಯುವ ನೀರು ಪೂರೈಕೆ ಮೊದಲ ಆದ್ಯತೆಯಾಗಿರಬೇಕು. ಇದರಲ್ಲಿ ವಿಳಂಬ ಧೋರಣೆಯನ್ನು ಸಹಿಸಲಾಗುವುದಿಲ್ಲ ಎಂದು ಎಚ್ಚರಿಕೆ

ನೀಡಿದ್ದಾರೆ. ನೀರಿನ ಸಮಸ್ಯೆ ತಲೆದೋರಿದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಸಬೇಕು. ಸಾರ್ವಜನಿಕರಿಗೆ ನೀರಿನ ಮಿತಬಳಕೆ ಕುರಿತಂತೆ ಜಾಗೃತಿ ಮೂಡಿಸಬೇಕು. ನಗರಸಭೆ ವಾಹನಗಳಲ್ಲಿ ಜಿಂಗಲ್ಸ್ ಮೂಲಕ  ಪ್ರಚಾರ ಮಾಡಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><>

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ತೊಗರಿ ಉತ್ಪನ್ನವನ್ನು ಖರೀದಿಸುವ ಅವಧಿಯನ್ನು ಇದೇ ೧೫ರವರೆಗೆ ವಿಸ್ತರಿಸಲಾಗಿದೆ ಎಂದು ವಿಜಯಪುರ ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ. ಪ್ರತಿ ಕ್ವಿಂಟಾಲ್‌ಗೆ ೭ ಸಾವಿರದ ೫೫೦ ರೂಪಾಯಿ ಜೊತೆಗೆ ರಾಜ್ಯ ಸರ್ಕಾರದ ಪ್ರೊತ್ಸಾಹಧನ ಪ್ರತಿ ಕ್ವಿಂಟಾಲ್‌ಗೆ ೪೫೦ ರೂಪಾಯಿ ಸೇರಿದಂತೆ ಒಟ್ಟು ೮ ಸಾವಿರ ರೂಪಾಯಿ ಪ್ರತಿ ಕ್ವಿಂಟಾಲ್‌ಗೆ ಖರೀದಿಸಲಾಗುತ್ತಿದೆ. ವಿಜಯಪುರ ಜಿಲ್ಲೆಯಲ್ಲಿ ತೊಗರಿ ಬೆಳೆದ ರೈತರು ತಮ್ಮ ಸಮೀಪದ ಪಿಎಸಿಎಸ್, ಟಿಎಪಿಸಿಎಂಎಸ್, ಎಫ್‌ಪಿಓ ಸಂಘಗಳಲ್ಲಿ ನೋಂದಣಿ ಮಾಡಿಸಿ ತೊಗರಿ ಮಾರಾಟ ಮಾಡಿ, ಬೆಂಬಲ ಬೆಲೆ ಸದುಪಯೋಗ ಪಡೆದುಕೊಳ್ಳುವಂತೆ  ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

ಕನ್ನಡ ನಾಡು, ನುಡಿಯ ಬೆಳವಣಿಗೆಗೆ ಪ್ರತಿಯೊಬ್ಬರೂ ಕಟಿಬದ್ಧರಾಗಬೇಕಿದೆ ಎಂದು ಹಿರಿಯ ಸಾಹಿತಿ ಗೊ.ರು.ಚನ್ನಬಸಪ್ಪ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ  ಕನಸವಾಡಿಯಲ್ಲಿ ನಡೆದ ೧೬ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಸಾಹಿತ್ಯ, ಸಾಮಾಜಿಕ ಕಳಕಳಿಯ ಸಂವೇದನೆಗಳಾಗಬೇಕಿದೆ ಎಂದು ತಿಳಿಸಿದ್ದಾರೆ. ಸಮ್ಮೇಳನದ ಅಧ್ಯಕ್ಷ ಸಾಕ್ಷ್ಯಚಿತ್ರ ಕಲಾವಿದ ಟಿ.ಕೆಂಪಣ್ಣ ಮಾತನಾಡಿ, ಕನ್ನಡ ಕೇವಲ ಸಂವಹನ ಭಾಷೆಯಲ್ಲ, ಅದೊಂದು ಜನರ ಸಂಸ್ಕೃತಿಯ ಪ್ರತೀಕ ಎಂದು ಹೇಳಿದ್ದಾರೆ.

<><><>

ಮಂಡ್ಯ ಜಿಲ್ಲೆಯ ಮೇಲುಕೋಟೆಯ ಚಲುವನಾರಾಯಣಸ್ವಾಮಿಯ ವೈರಮುಡಿ ತೆಪ್ಪೋತ್ಸವ ಕಳೆದ ರಾತ್ರಿ ಅದ್ದೂರಿಯಾಗಿ ನಡೆಯಿತು. ವಿಶ್ವಾವಸು ಸಂವತ್ಸರದ ವೈರಮುಡಿ ಬ್ರಹ್ಮೋತ್ಸವದ ೮ನೇ ತಿರುನಾಳ್ ಅಂಗವಾಗಿ ವಜ್ರ ಖಚಿತ ರಾಜಮುಡಿ ಕಿರೀಟ ಧಾರಣೆಯೊಂದಿಗೆ ಪಂಚ ಕಲ್ಯಾಣಿಯಲ್ಲಿ ತೆಪ್ಪೋತ್ಸವ ನೆರವೇರಿತು. ಕಲ್ಯಾಣಿ ನಾಲ್ಕು ಕಡೆ ಸೋಪಾನಗಳ ಮೇಲೆ ಭಕ್ತರು ಸಹಸ್ರಾರು ಸಂಖ್ಯೆಯಲ್ಲಿ ಕಿಕ್ಕಿರಿದು ತುಂಬಿ ತೆಪ್ಪೋತ್ಸವ ಕಣ್ತುಂಬಿಕೊಂಡರು. ಈ ಸಂದರ್ಭದಲ್ಲಿ

ಜಿಲ್ಲಾಧಿಕಾರಿ ಡಾ.ಕುಮಾರ, ಶಾಸಕ ದರ್ಶನ್ ಪುಟ್ಟಣ್ಣಯ್ಯ ಸೇರಿದಂತೆ ಹಲವರು ಭಾಗಿಯಾಗಿದ್ದರು.

**<><><><>**

ಮುಂದಿನ ಐದು ದಿನಗಳಲ್ಲಿ ಕರ್ನಾಟಕದ ಹಲವೆಡೆ ಗುಡುಗು ಸಹಿತ  ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆಯ ನಿರ್ದೇಶಕ ಸಿ.ಎಸ್ ಪಾಟೀಲ್ ತಿಳಿಸಿದ್ದಾರೆ. ಇಂದು ಧಾರವಾಡ, ತುಮಕೂರಿನಲ್ಲಿ ಸಾಧಾರಣ ಮಳೆಯಾಗಿದೆ. ಬೆಂಗಳೂರಿನಲ್ಲಿ ಇಂದಿನಿಂದ ಇದೇ ೧೯ರವರೆಗೆ ಗುಡುಗು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ತಿಳಿಸಿದೆ.

**ಧ್ವನಿ : ಸಿ.ಎಸ್. ಪಾಟೀಲ್ (೨೨ ಸೆಕೆಂಡ್‌ಗಳು)**

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>